## 18. ಮಲಪ್ರಭಾ, ಕೃಷ್ಣಾ ನೀರಿನ ಪ್ರಮಾಣ ಏರಿಕೆ

ಕರಾವಳಿ, ಮಲೆನಾಡಿನ ವಿವಿಧ ಜಿಲ್ಲೆಗಳಲ್ಲಿ ಮಳೆ ಮುಂದುವರೆದಿದೆ. ದಕ್ಷಿಣ ಕನ್ನಡದಲ್ಲಿ ಮಳೆ ಕಡಿಮೆ ಆಗಿದ್ದರೆ, ಸಮುದ್ರದ ಅಬ್ಬರ ತೀವ್ರಗೊಂಡಿದೆ. ಹರಪನಳ್ಳಿ ತಾಲ್ಲೂಕಿನಲ್ಲಿ ಮನೆ ಕುಸಿದು ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಮಲಪ್ರಭಾ ನದಿಗೆ ಒಳಹರಿವು ಹೆಚ್ಚಳವಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮುದ್ರದ ಅಬ್ಬರ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ. ಉಳ್ಳಾಲದ ಸೋಮೇಶ್ವರ ಉಚ್ಚಿಲ ಪ್ರದೇಶದಲ್ಲಿ ಎರಡು ಮನೆಗಳು ಸಮುದ್ರ ಪಾಲಾಗುವ ಸ್ಥಿತಿ ತಲುಪಿದ್ದು, 2 ಕುಟುಂಬಗಳನ್ನು ಸ್ಥಳಾಂತರಿಸಲಾಗಿದೆ. ಸೋಮೇಶ್ವರ–ಉಚ್ಚಿಲದಲ್ಲಿ 15 ತೆಂಗಿನ ಮರಗಳು ಸಮುದ್ರದ ಪಾಲಾಗಿವೆ. ಜಿಲ್ಲೆಯಲ್ಲಿ ಸರಾಸರಿ 1.7 ಸೆಂಟಿ ಮೀಟರ್ ಮಳೆ ಬಿದ್ದಿದೆ.

ಉಡುಪಿ ಜಿಲ್ಲೆಯ ಕುಂದಾಪುರ, ಬೈಂದೂರು, ಕಾಪು, ಬ್ರಹ್ಮಾವರ, ಹೆಬ್ರಿ, ತಾಲ್ಲೂಕುಗಳಲ್ಲಿ ಉತ್ತಮ ಮಳೆಯಾಗಿದೆ. ಬೈಂದೂರು ತಾಲ್ಲೂಕಿನ ಹೆರೂರಿನಲ್ಲಿ ಸಿಡಿಲಿಗೆ ಮನೆ ಭಾಗಶಃ ಹಾನಿಯಾಗಿದೆ. ಕಾಪು, ಬೈಂದೂರು ಭಾಗದಲ್ಲಿ ಕಡಲ್ಕೊರೆತ ಶುರುವಾಗಿದೆ. ಸ್ವರ್ಣಾ, ಸೀತಾ ನದಿಗಳ ಒಳಹರಿವು ಹೆಚ್ಚಿದೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ನಗರ, ಎನ್.ಆರ್.ಪುರ, ಬಾಳೆಹೊನ್ನೂರು, ಶೃಂಗೇರಿ ಭಾಗದಲ್ಲಿ ತುಂತುರು, ಕೊಪ್ಪ ಭಾಗದಲ್ಲಿ ಹಾಗೂ ಶಿವಮೊಗ್ಗ ಜಿಲ್ಲೆಯ ಶಿವಮೊಗ್ಗ, ಸಾಗರ, ತೀರ್ಥಹಳ್ಳಿ, ಹೊಸನಗರ ತಾಲ್ಲೂಕಿನ ಹಲವೆಡೆ ಸಾಧಾರಣ ಮಳೆಯಾಗಿದೆ. ರಾಜಾಪುರ ಬ್ಯಾರೇಜ್ ಮೂಲಕ 48.250 ಕ್ಯುಸೆಕ್ ಹಾಗೂ ದೂಧ್‌ಗಂಗಾ ನದಿಯ 15 ಸಾವಿರ ಕ್ಯುಸೆಕ್ಸ್ ಸೇರಿದಂತೆ ಚಿಕ್ಕೋಡಿಯ ಕಲ್ಲೋಳ ಬಳಿ ಕೃಷ್ಣಾ ನದಿಗೆ 63,250 ಕ್ಯುಸೆಕ್ ನೀರು ಸೇರಿಕೊಳ್ಳುತ್ತಿದೆ. ರಬಕವಿ ಬನಹಟ್ಟಿ ಸಮೀಪದ ಹಿಪ್ಪರಗಿ ಜಲಾಶಯಕ್ಕೆ 55.800 ಕ್ಯುಸೆಕ್ ನೀರು ಹರಿದಿದೆ. ಆಲಮಟ್ಟಿ ಜಲಾಶಯಕ್ಕೆ ಒಂದೇ ದಿನ 3.6 ಟಿಎಂಸಿ ಅಡಿ ನೀರು ಹರಿದು ಬಂದಿದೆ.

ಆಧಾರ:ಉದಯವಾಣಿ, ದಿನಾಂಕ:12.06.2020